# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಭದ್ರಾ ಮೇಲ್ದಂಡೆ ಯೋಜನೆಯ ಅಡಿಯಲ್ಲಿ ತರೀಕೆರೆ ತಾಲ್ಲೂಕಿನ ಕೆರೆಗಳನ್ನು ತುಂಬಿಸುವ ಹಾಗೂ ನೀರಾವರಿ ಸೌಲಭ್ಯ ಒದಗಿಸುವ ಯೋಜನೆಯ ರೂ. 75.00 ಕೋಟಿಗಳ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ

---

ಓದಲಾಗಿದೆ:

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೆಎನ್‌ಎನ್‌ಎಲ್ / ಯುಬಿಪಿ / ತರೀಕೆರೆ / ಟಿಎ3 / ಎಇ-7 / 08-09 / 1948, ದಿನಾಂಕ 16.09.2009.

ಪ್ರಸ್ತಾವನೆ:

ಭದ್ರಾ ಮೇಲ್ದಂಡೆ ಯೋಜನೆಯಿಂದ ವಂಚಿತವಾಗಿರುವ ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲ್ಲೂಕಿನ ಜನರು ತಮ್ಮ ತಾಲ್ಲೂಕಿಗೆ ನೀರಾವರಿ ಸೌಲಭ್ಯ ಒದಗಿಸುವ ಬಗ್ಗೆ ಮೇಲಿಂದ ಮೇಲೆ ಕೋರುತ್ತಿದ್ದು, ಕರ್ನಾಟಕ ನೀರಾವರಿ ನಿಗಮ ನಿಯಮಿತದಿಂದ ರೂ. 75.00 ಕೋಟಿಗಳ ಅಂದಾಜಿಗೆ ಅಂತಿಮಗೊಳಿಸಿ, ಭದ್ರಾ ಮೇಲ್ದಂಡೆ ಯೋಜನೆಯ ಹಂತ-1ರ ಅವಿಭಾಜ್ಯ ಅಂಗವಾಗಿ 0.8 ಟಿ.ಎಂ.ಸಿ ಯಷ್ಟು ನೀರನ್ನು ಉಪಯೋಗಿಸಿಕೊಂಡು, ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲ್ಲೂಕಿನ 52 ಕೆರೆಗಳನ್ನು ತುಂಬಿಸಿ, 5,471 ಹೆಕ್ಟೇರ್ (13,513 ಎಕರೆ) ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಈ ಪ್ರಸ್ತಾವನೆಯನ್ನು ಸಲ್ಲಿಸಿ, ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ಕೋರಲಾಗಿದೆ.

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಜಲ ಆಯೋಗದಿಂದ ಒಪ್ಪಿಗೆ ಪಡೆಯುವ ಬಗ್ಗೆ ಈಗಾಗಲೇ ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ಸದರಿ ಯೋಜನೆಯ ವಿವರವಾದ ಯೋಜನಾ ವರದಿಯನ್ನು ಕೇಂದ್ರ ಜಲ ಆಯೋಗಕ್ಕೆ ಸರ್ಕಾರದ ಪತ್ರ ದಿನಾಂಕ 24.07.2009 ರಲ್ಲಿ ಸಲ್ಲಿಸಲಾಗಿ ಜಲವಿಜ್ಞಾನ ನಿರ್ದೇಶನಾಲಯದ ಅನುಮೋದನೆ ಪಡೆದುಕೊಳ್ಳಲಾಗಿದ್ದು, ಇತರೇ ನಿರ್ದೇಶನಾಲಯಗಳ ಅನುಮೋದನೆ ಪಡೆಯಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿ ಅಂತಿಮವಾಗಿ ಬಂಡವಾಳಹೂಡಿಕೆ ತೀರುವಳಿಯನ್ನು ಭಾರತ ಸರ್ಕಾರದ ಯೋಜನಾ ಆಯೋಗದಿಂದ ಪಡೆಯಲಾಗುವುದು ಎಂಬುದಾಗಿ ನಿಗಮದಿಂದ ತಿಳಿಸಿದೆ.

ಪ್ರಸಕ್ತ ಆರ್ಥಿಕ ವರ್ಷದಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ರೂ. 129.83 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ. ಕೆರೆ ತುಂಬಿಸುವ ಈ ಪ್ರಸ್ತಾವನೆಯ ರೂ. 75.00 ಕೋಟಿಗಳ ಅಂದಾಜು ಮೊತ್ತವನ್ನು ಭದ್ರಾ ಮೇಲ್ದಂಡೆ ಯೋಜನೆಯ ಅನುಮೋದಿತ ರೂ. 5985.00 ಕೋಟಿಗಳ ಅಂದಾಜಿನಡಿಯಲ್ಲಿ ಭರಿಸಬಹುದಾಗಿದ್ದು, ಈ ಯೋಜನೆಗೆ ಸಂಬಂಧಿಸಿದ ಸರ್ವೆ ಕಾಮಗಾರಿಗಳು, ವಿವರವಾದ ಅಂದಾಜು ತಯಾರಿಕೆ, ಕರಡು ಟೆಂಡರ್ ಪುಸ್ತಕ ತಯಾರಿಕೆಯಂತಹ ಪ್ರಾಥಮಿಕ ಚಟುವಟಿಕೆಗಳನ್ನು Consultant ರವರ ಮೂಲಕ ಕೈಗೆತ್ತಿಕೊಳ್ಳಲಾಗುವುದಾಗಿ ನಿಗಮದಿಂದ ತಿಳಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಈ ಕೆಳಗಿನಂತೆ ಆದೇಶವನ್ನು ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಜಸಂಇ 150 ವಿಬ್ಯಾಇ 2009, ಬೆಂಗಳೂರು, ದಿನಾಂಕ 13.01.2011

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 0.8 ಟಿ.ಎಂ.ಸಿ. ನೀರನ್ನು ಬಳಸಿಕೊಂಡು, ತರೀಕೆರೆ ತಾಲ್ಲೂಕಿನ 5,471 ಹೆಕ್ಟೇರ್ (13,513 ಎಕರೆ) ಜಮೀನಿಗೆ ನೀರಾವರಿ ಸೌಲಭ್ಯ ಒದಗಿಸಲು ಹಾಗೂ 52 ಕೆರೆಗಳನ್ನು ತುಂಬಿಸಲು

ಭದ್ರಾ ಮೇಲ್ದಂಡೆ ಯೋಜನೆಯ ಅಂಗ ಭಾಗವಾಗಿ ಕೈಗೆತ್ತಿಕೊಳ್ಳಲುದ್ದೇಶಿಸಿರುವ ರೂ. 75.00 ಕೋಟಿಗಳ (ರೂಪಾಯಿ ಎಪ್ಪತ್ತೈದು ಕೋಟಿಗಳು ಮಾತ್ರ) ಅಂದಾಜು ಮೊತ್ತದ ಪ್ರಸ್ತಾವನೆಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ, ಕರ್ನಾಟಕ ನೀರಾವರಿ ನಿಗಮ ನಿಯಮಿತದ ವತಿಯಿಂದ ಕೈಗೊಳ್ಳಲು ಆದೇಶಿಸಿದೆ.

2. ಈ ಆದೇಶವು ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು, 1977ರ 17ನೇ ನಿಯಮದ (2)ನೇ ಉಪ ನಿಯಮದ ಪರಂತುಕದ ವ್ಯಾಪ್ತಿಯೊಳಗೆ ಬರುತ್ತದೆ ಮತ್ತು ಅದರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್. ಕೆ. ಸಂಪತ್‌ಕುಮಾರ್)
ವಿಶೇಷಾಧಿಕಾರಿ (ತಾಂತ್ರಿಕ-4),
ಜಲ ಸಂಪನ್ಮೂಲ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು (ಲೆಕ್ಕ ಪತ್ರ)/(ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು-1
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಕಾಫಿ ಬೋರ್ಡ್ ಕಟ್ಟಡ, ಬೆಂಗಳೂರು-1
3. ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಭದ್ರಾ ಮೇಲ್ದಂಡೆ ಯೋಜನಾ ವಲಯ, ಚಿತ್ರದುರ್ಗ
4. ಆರಕ್ಷಕ ಮಹಾ ನಿರೀಕ್ಷಕರು, ವಿಚಕ್ಷಣಾ ದಳ, ಜಲ ಸಂಪನ್ಮೂಲ ಇಲಾಖೆ, ಬಸವ ಭವನ, ಬೆಂಗಳೂರು-1
5. ಸರ್ಕಾರದ ಜಂಟಿ ಕಾರ್ಯದರ್ಶಿ (ಸೇವೆಗಳು), ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು-1
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ ಶಾಖೆ), ವಿಧಾನ ಸೌಧ, ಬೆಂಗಳೂರು (ಸಚಿವ ಸಂಪುಟ ವಿಷಯ ಸಂಖ್ಯೆ:ಸಿ 609/2010, ದಿನಾಂಕ 29.11.2010ರ ಮೇರೆಗೆ)
7. ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು-1
8. ಜಲ ಸಂಪನ್ಮೂಲ ಇಲಾಖೆಯ ಎಲ್ಲಾ ಉಪ ಕಾರ್ಯದರ್ಶಿಗಳು / ವಿಶೇಷ ಕರ್ತವ್ಯಾಧಿಕಾರಿಗಳು / ಅಧೀನ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು-1
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಪತ್ರಾಂಕಿತ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು-1
10. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು
11. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿ.